ಕರ್ನಾಟಕ ಸರ್ಕಾರ
(ಕೃಷಿ ಇಲಾಖೆ)

ಸಂಖ್ಯೆ:ಉಕೃನಿ/ಬೆಸವಿ/LAQ-802/2024-25

ಕೃಷಿ ಆಯುಕ್ತರ ಕಾರ್ಯಾಲಯ,
ಶೇಷಾದ್ರಿರಸ್ತೆ, ಬೆಂಗಳೂರು-1,
ದಿನಾಂಕ: 18.07.2024

ಇವರಿಗೆ,

ಸರ್ಕಾರದ ಕಾರ್ಯದರ್ಶಿಗಳು,
ಕೃಷಿ ಇಲಾಖೆ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು-01

ಮಾನ್ಯರೇ,

ವಿಷಯ: ಶ್ರೀ ಪಾಟೀಲ್ ಜೆ.ಟಿ (ಬೀಳಗಿ), ವಿಧಾನಸಭೆಯ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 802ಕ್ಕೆ ಉತ್ತರ ಸಲ್ಲಿಸುವ ಕುರಿತು.

ಉಲ್ಲೇಖ: ಪ.ಸಂ: ಪ್ರಶಾವಿಸ/16ನೇವಿಸ/4ನೇಅ/ಪ್ರ.ಸಂ.802/2024 ದಿನಾಂಕ: 10.07.2024.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ಶ್ರೀ ಪಾಟೀಲ್ ಜೆ.ಟಿ (ಬೀಳಗಿ), ವಿಧಾನಸಭೆಯ ಸದಸ್ಯರು, ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 802ಕ್ಕೆ ಸಂಬಂಧಪಟ್ಟಂತೆ ಉತ್ತರವನ್ನು ಸಿದ್ಧಪಡಿಸಿ ತಮ್ಮ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

ಲಗತ್ತು: ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 802ಕ್ಕೆ ಉತ್ತರದ ಪ್ರತಿಗಳು.

ವಂದನೆಗಳೊಂದಿಗೆ

ತಮ್ಮ ವಿಶ್ವಾಸಿ,

ಕೃಷಿ ನಿರ್ದೇಶಕರು

D:\crop survey original\Crop Survey 2024-25\LAQs\LAQ 802.docx

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	802
ಪ್ರಶ್ನೆ ಕೇಳಿರುವ ಸದಸ್ಯರು	ಶ್ರೀ ಪಾಟೀಲ್ ಜೆ.ಟಿ (ಬೀಳಗಿ)
ಉತ್ತರ ನೀಡುವ ಸಚಿವರು	ಮಾನ್ಯ ಕೃಷಿ ಸಚಿವರು
ಉತ್ತರಿಸಬೇಕಾದ ದಿನಾಂಕ	24.07.2024

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕಾಲ ಕಾಲಕ್ಕೆ ಬೆಳೆಗಳ ದಾಖಲಾತಿ ಸಮರ್ಪಕವಾಗಿ ನಡೆಯದಿರುವುದರಿಂದ ರೈತರು ಸರ್ಕಾರದ ಯೋಜನೆ ಹಾಗೂ ಸವಲತ್ತುಗಳಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ	ಬೆಳೆಗಳ ದಾಖಲಾತಿ ಸಮರ್ಪಕವಾಗಿ ನಡೆಯದಿರುವುದರಿಂದ ರೈತರು ಸರ್ಕಾರದ ಯೋಜನೆ ಹಾಗೂ ಸವಲತ್ತುಗಳಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಬೆಳೆ ಪ್ರದೇಶದ ನಿಖರ ಮಾಹಿತಿ ದಾಖಲಾತಿಗಾಗಿ ಆಯಾ ವರ್ಷದ ಪೂರ್ವ ಮುಂಗಾರು, ಮುಂಗಾರು, ಹಿಂಗಾರು ಹಾಗೂ ಬೇಸಿಗೆ ಹಂಗಾಮುಗಳಲ್ಲಿ ಕಂದಾಯ, ಕೃಷಿ, ತೋಟಗಾರಿಕೆ, ರೇಷ್ಮೆ ಇಲಾಖೆಗಳ ಅಧಿಕಾರಿಗಳ ನೆರವಿನೊಂದಿಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಇ-ಆಡಳಿತ) ರವರು ಅಭಿವೃದ್ಧಿ ಪಡಿಸಿರುವ ಮೊಬೈಲ್ ಆಪ್ ಬಳಸಿಕೊಂಡು ಸಮರ್ಪಕವಾಗಿ ಬೆಳೆ ಸಮೀಕ್ಷೆಯನ್ನು ಕೈಗೊಳ್ಳಲಾಗುತ್ತಿದೆ.
ಆ)	ಸವಳು-ಜವಳು ನಿರ್ಮೂಲನೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ವಿವರಿಸಿ?	ಅನ್ವಯಿಸುವುದಿಲ್ಲ.

ಕೃಷಿ ನಿರ್ದೇಶಕರು

D:\crop survey original\Crop Survey 2024-25\LAQs\LAQ 802.docx